ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

(1) ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 29/11/20

# ಒಂದು ರಾಷ್ಟ್ರ ಒಂದು ಚುನಾವಣೆ ಅಧಿವೇಶನದಲ್ಲಿ ಚರ್ಚೆ

29/11/20

**ಸಂ.ಕ. ಸಮಾಚಾರ ಬೆಂಗಳೂರು**

ಡಿಸೆಂಬರ್ 7ರಿಂದ 15ರವರೆಗೆ ನಡೆಯಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಎರಡು ದಿನ ಒಂದು ರಾಷ್ಟ್ರ -ಒಂದು ಚುನಾವಣೆ ಕುರಿತ ಚರ್ಚೆಗೆ ಅವಕಾಶ ನೀಡಲಾಗುತ್ತಿದೆ.



ವಿಧಾನಮಂಡಲ ಚಳಿಗಾಲದ ಅಧಿವೇಶನಕ್ಕೆ ಸಂಬಂಧಿಸಿದಂತೆ ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರಹೆಗಡೆ ಕಾಗೇರಿ ಅವರು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿ, ನವೆಂಬರ್ 25 ಮತ್ತು 26 ರಂದು ಗುಜರಾತ್‌ನ ಕೆವಾಡಿಯಾದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 80ನೇ ಅಖಿಲ ಭಾರತ ಪೀಠಾಸೀನ ಅಧಿಕಾರಿಗಳ ಸಮ್ಮೇಳನದಲ್ಲಿ ಪ್ರಸ್ತಾಪಿಸಿದ ಒಂದು ರಾಷ್ಟ್ರ-ಒಂದು ಚುನಾವಣೆ ಕುರಿತ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಭಾರತದಲ್ಲೇ ಪ್ರಪ್ರಥಮವಾಗಿ ಈ ವಿಷಯವನ್ನು ಅಧಿವೇಶನದಲ್ಲಿ ಸಮಗ್ರವಾಗಿ ಚರ್ಚಿಸಿ ಚಿಂತನ-ಮಂಥನ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಒಂದು ರಾಷ್ಟ್ರ-ಒಂದು ಚುನಾವಣೆ ವಿಷಯ ಕುರಿತು ಡಿಸೆಂಬರ್ 14 ಮತ್ತು 15 ರಂದು ರಾಜ್ಯ ವಿಧಾನಸಭೆಯಲ್ಲಿ ಚರ್ಚೆ ನಡೆಯಲಿದೆ. ಒಂದು ರಾಷ್ಟ್ರ-ಒಂದು ಚುನಾವಣೆ ಕುರಿತ ಎಲ್ಲಾ ಮಜಲುಗಳ ಚರ್ಚೆ ಪೂರ್ಣ ಪ್ರಮಾಣದಲ್ಲಿ ಆಗಬೇಕೆಂಬ ಸದುದ್ದೇಶದ ಹಿನ್ನೆಲೆಯಲ್ಲಿ ತಾವು ಈಗಾಗಲೇ ಈ ವಿಷಯವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಜೆಡಿಎಸ್ ಮುಖಂಡ ಎಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಪ್ರಸ್ತಾಪಿಸಿ ಈಗಾಗಲೇ ಎಲ್ಲರ ಸಹಕಾರವನ್ನು ಕೋರಿರುವುದಾಗಿ ತಿಳಿಸಿದರು.

ಡಿಸೆಂಬರ್ 7 ರಿಂದ ಪ್ರಾರಂಭವಾಗುವ ಅಧಿವೇಶನದಲ್ಲಿ ಪ್ರಶ್ನೋತ್ತರ ಒಳಗೊಂಡಂತೆ ಎಲ್ಲಾ ಕಾರ್ಯಕಲಾಪಗಳು ಇರುತ್ತವೆ ಎಂದು ಸ್ಪಷ್ಟಪಡಿಸಿದ ಅವರು ಸದನದಲ್ಲಿ ಹತ್ತು ವಿಧೇಯಕಗಳು ಮಂಡನೆಗೆ ಸಿದ್ಧವಿದೆ. ಕೊರೋನಾ ಹಿನ್ನೆಲೆಯಲ್ಲಿ ಈ ಹಿಂದೆ ಕೈಗೊಂಡ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದರು.

ಕಲಾಪದಲ್ಲಿ ಪಾಲ್ಗೊಳ್ಳುವ ಸದಸ್ಯರು, ಕಲಾಪದ ಚಟುವಟಿಕೆಗಳಿಗೆ ನೆರವಾಗುವ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಕಲಾಪದ ವರದಿಯ ವೀಕ್ಷಣೆಗೆ ಆಗಮಿಸುವ ಮಾಧ್ಯಮದವರಿಗೆ ಮತ್ತೆ ಆರ್.ಟಿ.ಪಿ.ಸಿ.ಆರ್. ಪರೀಕ್ಷೆ ಮಾಡಿಸಿಕೊಂಡು ಬರಬೇಕೇ ಅಥವಾ ಬೇಡವೇ ? ಎಂಬ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನ ಕೈಗೊಳ್ಳಲು ಯೋಚಿಸಲಾಗಿದೆ ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ವಿಧಾನ ಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಮತ್ತಿತರರು ಉಪಸ್ಥಿತರಿದ್ದರು.

CM K